ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 03 ನೇ ಮಾರ್ಚ್, 2020

ಧಾರ್ಮಿಕ ಕೈಗಾರಿಕೆ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-

163 (189) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಧಾರ್ಮಿಕ ಕೈಗಾರಿಕೆ ಎಂದರೇನು ; ರಾಜ್ಯದಲ್ಲಿ ಇದುವರೆಗೆ ಧಾರ್ಮಿಕ ಕೈಗಾರಿಕೆಗೆಂದು ಎಷ್ಟು ಎಕರೆ ಭೂಮಿಯನ್ನು ಕೆ.ಐ.ಡಿ.ಬಿ. ಮುಖಾಂತರ ಉದ್ಯಮಿಗಳಿಗೆ ಗುತ್ತಿಗೆ/ಮಾರಾಟದ ಮೂಲಕ ವಿತರಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಯಾವ ಉದ್ದೇಶಕ್ಕೆ ಕೆ.ಐ.ಡಿ.ಬಿ. ಮುಖಾಂತರ ಉದ್ಯಮಿಗಳಿಗೆ ಗುತ್ತಿಗೆ/ಮಾರಾಟದ ಮೂಲಕ ವಿತರಿಸಲಾಗಿದೆಯೋ ಆ ಉದ್ದೇಶಕ್ಕೆ ಬಳಸಿಕೊಳ್ಳದ ಎಷ್ಟು ಎಕರೆ ಭೂಮಿಯನ್ನು ಕೆ.ಐ.ಡಿ.ಬಿ. ಹಿಂದಕ್ಕೆ ಪಡೆದುಕೊಂಡಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಬೆಂಗಳೂರು ದಕ್ಷಿಣ ತಾಲ್ಲೂಕು ಉತ್ತರಹಳ್ಳಿ ಹೋಬಳಿ ದೊಡ್ಡಕಲ್ಲಸಂದ್ರ ಗ್ರಾಮದ ಸರ್ವೇ ನಂ. 55/1 (ಪಿ). 55/2 (ಪಿ), 56,57,58,59 (ಪಿ) ಮತ್ತು 60(ಪಿ) ಯಲ್ಲಿನ 24 ಎಕರೆ ಜಾಗವನ್ನು ಯಾವ ಉದ್ದೇಶಕ್ಕಾಗಿ ಯಾರಿಗೆ ಕೆ.ಐ.ಡಿ.ಬಿ. ಮುಖಾಂತರ ವಿತರಿಸಲಾಗಿತ್ತು ;

(ಈ) ಪ್ರಸ್ತುತ ಆ ಜಾಗದಲ್ಲಿ ಯಾವ ಕೈಗಾರಿಕೆ ಪ್ರಾರಂಭಗೊಂಡಿದೆ ; ಇದರಿಂದ ಎಷ್ಟು ಕನ್ನಡಿಗರಿಗೆ ಉದ್ಯೋಗ ದೊರೆತಿದೆ ; ಈ ಕೈಗಾರಿಕೆಯ ಉತ್ಪನ್ನಗಳಾವುವು ;

(ಉ) ಸದರಿ ಜಾಗವನ್ನು ಯಾವ ಉದ್ದೇಶಕ್ಕಾಗಿ ನೀಡಲಾಗಿತ್ತೋ ಆ ಉದ್ದೇಶಕ್ಕೆ ಬಳಸಿಕೊಳ್ಳದಿದ್ದಲ್ಲಿ ಸದರಿ ಜಾಗವನ್ನು ಕೆ.ಐ.ಡಿ.ಬಿ. ಹಿಂದಕ್ಕೆ ಪಡೆದುಕೊಳ್ಳಲು ಯಾವ ಕ್ರಮ ಕೈಗೊಂಡಿದೆ ; ಈ ಕುರಿತು ಯಾವಾಗ ನೋಟಿಸ್ ನೀಡಲಾಗಿದೆ ?